# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ | : | 499 |
| ಮಾನ್ಯ ಸದಸ್ಯರ ಹೆಸರು | : | ಶ್ರೀ ಕೆ. ಹರೀಶ್ ಕುಮಾರ್ (ವಿಧಾನಸಭೆಯಿಂದ ಚುನಾಯಿತರಾದವರು) |
| ಉತ್ತರಿಸಬೇಕಾದ ದಿನಾಂಕ | : | 20/02/2023 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಸರ್ಕಾರಿ ಆಸ್ಪತ್ರೆಗಳಲ್ಲಿ ದಾಖಲಾತಿಗೆ ಯಾವುದೇ ಸಕಾರಣವಿಲ್ಲದೇ ವಿಳಂಬ ನೀತಿ ಅನುಸರಿಸುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಬಂದಿದ್ದಲ್ಲಿ, ಈ ಕುರಿತಂತೆ ಏನು ಕ್ರಮ ಕೈಗೊಳ್ಳಲಾಗಿದೆ (ಮಾಹಿತಿ ಒದಗಿಸುವುದು). | ಬಂದಿದೆ.<br><br>ಹೊರ ರೋಗಿಗಳನ್ನು ಪರೀಕ್ಷಿಸುವ/ವೈದ್ಯಕೀಯ ಮೌಲ್ಯಮಾಪನದ ಆಧಾರದ ಮೇಲೆ ತುರ್ತು ಪರಿಸ್ಥಿತಿ ಅಥವಾ ಅವಶ್ಯಕತೆಯ ಅನುಗುಣವಾಗಿ ಒಳರೋಗಿಗಳ ದಾಖಲಾತಿಯು ನಿರ್ಧಾರವಾಗುತ್ತದೆ.<br><br>ರಾಜ್ಯದ ಸಾರ್ವಜನಿಕ ಆಸ್ಪತ್ರೆಗಳಲ್ಲಿ ತುರ್ತು ಆರೋಗ್ಯ ಸೇವೆ ಪಡೆಯುವ ಸಲುವಾಗಿ ದಾಖಲಾಗುವ ರೋಗಿಗಳ ಚಿಕಿತ್ಸೆ ಸಂದರ್ಭದಲ್ಲಿ ದಾಖಲೆಗಳನ್ನು ಒದಗಿಸಿಲ್ಲವೆಂಬ ಕಾರಣಗಳಿಗಾಗಿ ಚಿಕಿತ್ಸೆಯನ್ನು ನೀಡಲು ನಿರಾಕರಿಸುವುದನ್ನು ತಡೆಗಟ್ಟುವ ಸಲುವಾಗಿ ಸರ್ಕಾರದ ದಿನಾಂಕ : 23/11/2022 ಹಾಗೂ ನಿರ್ದೇಶನಾಲಯದ ದಿನಾಂಕ : 04/11/2022ರ ಸುತ್ತೋಲೆಗಳಲ್ಲಿ ಮಾರ್ಗಸೂಚಿಗಳನ್ನು ನಿಗದಿಪಡಿಸಲಾಗಿದೆ. ಇದರಲ್ಲಿ ರಾಜ್ಯದ ಎಲ್ಲಾ ಸಾರ್ವಜನಿಕ ಆಸ್ಪತ್ರೆಗಳಲ್ಲಿ ತುರ್ತು ಆರೋಗ್ಯ ಸೇವೆ ನೀಡುವ ಸಮಯದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವಂತೆ ವೈದ್ಯರು ಮತ್ತು ಅರೆ ವೈದ್ಯಕೀಯ ಸಿಬ್ಬಂದಿ/ಇತರೆ ಸಿಬ್ಬಂದಿಗಳು ಅನುಸರಿಸಬೇಕಾದ ಕ್ರಮದ ಬಗ್ಗೆ ಕಟ್ಟುನಿಟ್ಟಾದ ಸೂಚನೆಗಳನ್ನು ನೀಡಲಾಗಿದೆ (**ಪ್ರತಿಗಳನ್ನು ಲಗತ್ತಿಸಿದೆ.**) |
| ಆ) | ಸರ್ಕಾರವು ಬಡವರ ಅನುಕೂಲಕ್ಕಾಗಿ ಸಾವಿರಾರು ಕೋಟಿ ಅನುದಾನದಲ್ಲಿ ಸರ್ಕಾರಿ ಆಸ್ಪತ್ರೆಗಳನ್ನು ನಡೆಸುತ್ತಿದ್ದು, ವಿವಿಧ ಯೋಜನೆಗಳ ಅಡಿಯಲ್ಲಿ ಉಚಿತ ಚಿಕಿತ್ಸೆ ಔಷಧಿ ಒದಗಿಸುವ | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ಸರ್ಕಾರಿ ಆಸ್ಪತ್ರೆಗಳಲ್ಲಿ ಬಡರೋಗಿಗಳಿಗೆ ಹಾಗೂ ಬಿ.ಪಿ.ಎಲ್. ಕಾರ್ಡ್‌ದಾರರಿಗೆ ಇಲಾಖೆಯ ವಿವಿಧ ಯೋಜನೆಯಡಿಯಲ್ಲಿ ಉಚಿತ ಚಿಕಿತ್ಸೆ ಮತ್ತು ಔಷಧಿಗಳನ್ನು ಒದಗಿಸಲಾಗುತ್ತಿದೆ.<br><br>ಆರೋಗ್ಯ ಇಲಾಖೆಯಲ್ಲಿ ಆಯುಷ್ಮಾನ್ ಭಾರತ್ ಡಿಜಿಟಲ್ ಅಭಿಯಾನದಡಿಯಲ್ಲಿ '**ಸರತಿ ಸಾಲಿನಲ್ಲಿ** ನಿಲ್ಲುವುದನ್ನು |

| | | |
|---|---|---|
| | ಅವಕಾಶವಿದ್ದರೂ ಬಡರೋಗಿಗಳಿಗೆ ಬಿ.ಪಿ.ಎಲ್., ಕಾರ್ಡ್‌ದಾರರಿಗೆ ಅನಾವಶ್ಯಕವಾಗಿ ಅಲೆದಾಡಿಸುತ್ತಿರುವುದು ಮತ್ತು ಸೂಕ್ತ ಚಿಕಿತ್ಸೆ ಸಿಗದೇ ರೋಗಿಗಳು ತೊಂದರೆ ಅನುಭವಿಸುತ್ತಿರುವುದು ಹಾಗೂ ಸಾವು ಸಂಭವಿಸುತ್ತಿರುವುದು ವರದಿಯಾಗಿದ್ದು, ಈ ಕುರಿತಂತೆ ಸರ್ಕಾರವು ಕಠಿಣ ಕ್ರಮ ಕೈಗೊಳ್ಳುವುದೇ? (ವಿವರ ನೀಡುವುದು). | **ತಪ್ಪಿಸಿ**' (**Skip the Queue**) ಎಂಬ ನೂತನ ಕಾರ್ಯಕ್ರಮವನ್ನು ಅನುಷ್ಠಾನಗೊಳಿಸಲಾಗಿದೆ. ಇದರಿಂದಾಗಿ ವೈದ್ಯರ ಸಮಾಲೋಚನೆಗಾಗಿ ರೋಗಿಗಳು ಕಾಯುವ ಸಮಯವು ಗಣನೀಯವಾಗಿ ತಗ್ಗಿದ್ದು, ಹೊರ ರೋಗಿಗಳು ಶೀಘ್ರವಾಗಿ ವೈದ್ಯರ ಸಲಹೆ ಪಡೆಯಲು ಸಹಕಾರಿಯಾಗಿದೆ. ಆಸ್ಪತ್ರೆಗಳಲ್ಲಿ ಬಿ.ಪಿ.ಎಲ್., ರೋಗಿಗಳಿಗೆ ಚಿಕಿತ್ಸೆಯು ಸಂಪೂರ್ಣವಾಗಿ ಉಚಿತವಾಗಿದ್ದು, AB-ArK ಯೋಜನೆಯಡಿ ಪ್ರತಿ ಕುಟುಂಬಕ್ಕೆ ವಾರ್ಷಿಕವಾಗಿ ರೂ.1.50 ಲಕ್ಷಗಳವರೆಗೆ ಸರ್ಕಾರವೇ ಭರಿಸುತ್ತದೆ.<br><br>ಡಯಾಲಿಸಿಸ್ ಸೇವೆಗಳನ್ನು ಉಚಿತವಾಗಿ ಒದಗಿಸಲಾಗುತ್ತಿದೆ. ಪ್ರತಿ ಜಿಲ್ಲಾಸ್ಪತ್ರೆಗಳಲ್ಲಿ 10 ಹಾಸಿಗೆಗಳನ್ನು ಹಾಗೂ ಪ್ರತಿ ತಾಲ್ಲೂಕು ಆಸ್ಪತ್ರೆಗಳಲ್ಲಿ 2 ಹಾಸಿಗೆಗಳನ್ನು ಡಯಾಲಿಸಿಸ್ ಸೇವೆಗಳಿಗಾಗಿ ಕಾಯ್ದಿರಿಸಲಾಗಿದೆ.<br><br>ಎಲ್ಲಾ ಜಿಲ್ಲಾಸ್ಪತ್ರೆಗಳಲ್ಲಿ ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ CT Scan/MRI Scan ಸೇವೆಗಳನ್ನು ಸಾರ್ವಜನಿಕರಿಗೆ ಉಚಿತವಾಗಿ ಒದಗಿಸಲು ಉದ್ದೇಶಿಸಲಾಗಿದೆ.<br><br>ಈ ಮೇಲ್ಕಂಡ ಎಲ್ಲಾ ಸೇವೆಗಳನ್ನು ಇಲಾಖೆಯ '**ನಿಮ್ಮ ಆರೋಗ್ಯ ನಮ್ಮ ಬದ್ಧತೆ**' ಎಂಬ ಧ್ಯೇಯ ವಾಕ್ಯದಂತೆ ಒದಗಿಸಲಾಗುತ್ತಿದ್ದು, ಆದಾಗ್ಯೂ ಚಿಕಿತ್ಸೆ ನೀಡುವುದನ್ನು ನಿರಾಕರಿಸಿದಲ್ಲಿ, ಸಂಬಂಧಪಟ್ಟ ಆಸ್ಪತ್ರೆಯ ವೈದ್ಯರು ಮತ್ತು ಅರೆ ವೈದ್ಯಕೀಯ ಸಿಬ್ಬಂದಿ/ಇತರೆ ಸಿಬ್ಬಂದಿಗಳನ್ನು ನೇರ ಜವಾಬ್ದಾರರನ್ನಾಗಿಸಿ; ಅದು ಅವರು ಎಸಗಿರುವ ದುರ್ನಡತೆ ಎಂದು ಪರಿಗಣಿಸಿ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲು ಅವಕಾಶವಿರುತ್ತದೆ. |

**(ಆಕುಕ 19 ಹೆಚ್‌ಎಸ್‌ಡಿ 2023)**

(ಡಾ|| ಕೆ. ಸುಧಾಕರ್)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಹಾಗೂ ವೈದ್ಯಕೀಯ ಶಿಕ್ಷಣ ಸಚಿವರು.

ಕರ್ನಾಟಕ ಸರ್ಕಾರ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳ ಆಯುಕ್ತಾಲಯ
"ಆರೋಗ್ಯ ಸೌಧ", 1ನೇ ಅಡ್ಡ ರಸ್ತೆ, ಮಾಗಡಿ ರಸ್ತೆ, ಬೆಂಗಳೂರು - 23
ದೂರವಾಣಿ ಸಂಖ್ಯೆ:080-23140943
ಇ-ಮೇಲ್ ವಿಳಾಸ: dirhfw@gmail.com

ಸಂಖ್ಯೆ:ಆಕುಕಆ/ಆಪ್ರ/66/2022-23

ದಿನಾಂಕ:04.11.2022

## ಸುತ್ತೋಲೆ

ವಿಷಯ: ರಾಜ್ಯದ ಎಲ್ಲಾ ಆಸ್ಪತ್ರೆಗಳಲ್ಲಿ ತುರ್ತು ಪರಿಸ್ಥಿತಿಯಲ್ಲಿ ಚಿಕಿತ್ಸೆಯನ್ನು ಒದಗಿಸುವ ಬಗ್ಗೆ.

ಉಲ್ಲೇಖ: ಮಾನ್ಯ ಆಯುಕ್ತರು, ಆಕುಕ ಸೇವೆಗಳ ಆಯುಕ್ತಾಲಯ ರವರ ದಿನಾಂಕ: 03.01.2022ರಲ್ಲಿ ನೀಡಿರುವ ಪತ್ರಿಕಾ ಪ್ರಕಟಣೆಯ ಟಿಪ್ಪಣಿಯಂತೆ

**********

ಈ ಮೇಲ್ಕಂಡ ವಿಷಯ ಮತ್ತು ಉಲ್ಲೇಖಿತ ಪತ್ರಿಕಾ ಪ್ರಕಟಣೆಯ ಟಿಪ್ಪಣಿಯಂತೆ, ಈ ಕೆಳಕಂಡ ಅಂಶಗಳನ್ನು ರಾಜ್ಯದ ಎಲ್ಲಾ ಆಸ್ಪತ್ರೆಗಳಲ್ಲಿ ತುರ್ತು ಪರಿಸ್ಥಿತಿಯಲ್ಲಿ ಚಿಕಿತ್ಸೆಯನ್ನು ಒದಗಿಸುವ ಸಂಬಂಧ ಅಳವಡಿಸಿಕೊಳ್ಳಲು ಸೂಚಿಸಿದೆ.

1. ತುರ್ತು ಪರಿಸ್ಥಿತಿಯಲ್ಲಿ ಚಿಕಿತ್ಸೆಗೆ ಸರ್ಕಾರಿ ಆಸ್ಪತ್ರೆಗೆ ಬರುವ ರೋಗಿಯು ಯಾವುದೇ ದಾಖಲೆಯೂ ಇಲ್ಲದೇ ಇದ್ದರೂ ಸಹ ಅವಶ್ಯಕ ಚಿಕಿತ್ಸೆಯನ್ನು ನೀಡುವುದು.
2. ರೋಗಿಯು ಯಾವುದೇ ದಾಖಲೆಯು ಅಂದರೆ ತಾಯಿ ಕಾರ್ಡ್, ಆಧಾರ ಕಾರ್ಡ್, ಪಡಿತರ ಚೀಟಿ ಇಲ್ಲದೇ ಇದ್ದರೂ ಸಹ ಅವಶ್ಯಕ ಚಿಕಿತ್ಸೆಯನ್ನು ನೀಡುವುದು.
3. ಆರೋಗ್ಯ ಸೇವೆಯನ್ನು ನೀಡುವಾಗ ರೋಗಿಯ ರಾಷ್ಟ್ರೀಯತೆ/ ಜಾತಿ/ ವರ್ಗ/ ಆರ್ಥಿಕ ಸ್ಥಿತಿಯನ್ನು ಅವಲಂಬಿಸಿರಬಾರದು.
4. ತುರ್ತು ಪರಿಸ್ಥಿತಿಯಲ್ಲಿ ರೋಗಿಗೆ ಚಿಕಿತ್ಸೆಯುಅವಶ್ಯಕವಾಗಿದ್ದು, ವೈದ್ಯರು, ಶುಶ್ರೂಷಕರು ಮತ್ತು ಇತರೆ ಸಿಬ್ಬಂದಿಗಳು ಈ ಬಗ್ಗೆ ಕ್ರಮವಹಿಸುವುದು.

ಆದುದರಿಂದ ಈ ಮೇಲಿನ ಎಲ್ಲಾ ಅಂಶಗಳನ್ನು ಅನುಸರಿಸಿ, ಸಾರ್ವಜನಿಕ ಆರೋಗ್ಯ ಸಂಸ್ಥೆಗಳು/ ಆಸ್ಪತ್ರೆಗಳು/ಆರೋಗ್ಯ ಕೇಂದ್ರಗಳು ತುರ್ತು ಪರಿಸ್ಥಿತಿಯಲ್ಲಿ ಚಿಕಿತ್ಸೆಗೆ ಯಾವುದೇ ರೀತಿಯ ದಾಖಲೆಗಳನ್ನು ಒದಗಿಸಲು ಒತ್ತಾಯಿಸದಂತೆ ಈ ಮೂಲಕ ತಿಳಿಸಲಾಗಿದೆ, ಮುಂದುವರೆದು ಯಾವುದೇ ಅಹಿತಕರ ಘಟನೆಯು ಸಂಭವಿಸಿದಲ್ಲಿ ಇಲಾಖೆಯ ಸಂಬಂಧಪಟ್ಟ ಅಧಿಕಾರಿ/ನೌಕರರನ್ನು ಸರ್ಕಾರಿ ಸೇವೆಯಿಂದ ವಜಾಗೊಳಿಸಲಾಗುವುದು ಹಾಗೂ ಕ್ರಿಮಿನಲ್ ಮೊಕದ್ದಮೆಯನ್ನು ಹೂಡಲಾಗುವುದೆಂದು ಸೂಚಿಸಿದೆ.

ನಿರ್ದೇಶಕರು 4/11/22
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು,
ಬೆಂಗಳೂರು.

ಮುಂದಿನ ಕ್ರಮಕ್ಕಾಗಿ:

1. ಎಲ್ಲಾ ವಿಭಾಗೀಯ ಸಹ ನಿರ್ದೇಶಕರುಗಳು, ತಮ್ಮ ವ್ಯಾಪ್ತಿಯಲ್ಲಿನ ಎಲ್ಲಾ ಜಿಲ್ಲೆಗಳಲ್ಲಿ ಈ ಎಲ್ಲಾ ಸೂಚನೆಗಳನ್ನು ಪಾಲಿಸಲು ಸೂಚಿಸುವುದು.
2. ಎಲ್ಲಾ ನೋಡಲ್ ಅಧಿಕಾರಿಗಳು, ತಮ್ಮ ಜಿಲ್ಲೆಗಳಿಗೆ ಭೇಟಿ ನೀಡುವ ಸಂದರ್ಭಗಳಲ್ಲಿ ಈ ಎಲ್ಲಾ ಸೂಚನೆಗಳನ್ನು ಪಾಲಿಸಲು ಸೂಚಿಸುವುದು.
3. ಎಲ್ಲಾ ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಅಧಿಕಾರಿಗಳು.
4. ಎಲ್ಲಾ ಜಿಲ್ಲಾ ಶಸ್ತ್ರಚಿಕಿತ್ಸಕರು.

ಕರ್ನಾಟಕ ಸರ್ಕಾರ

ಸಂಖ್ಯೆ: HFW/860/HSH/2022

ಕರ್ನಾಟಕ ಸರ್ಕಾರ ಸಚಿವಾಲಯ,
ವಿಕಾಸ ಸೌಧ,
ಬೆಂಗಳೂರು, ದಿನಾಂಕ :23/11/2022.

## ಸುತ್ತೋಲೆ

**ವಿಷಯ:** ರಾಜ್ಯದ ಸಾರ್ವಜನಿಕ ಆಸ್ಪತ್ರೆಗಳಲ್ಲಿ ತುರ್ತು ಆರೋಗ್ಯ ಸೇವೆ ಪಡೆಯುವ ಸಲುವಾಗಿ ದಾಖಲಾಗುವ ರೋಗಿಗಳ ಚಿಕಿತ್ಸೆ ಸಂದರ್ಭದಲ್ಲಿ ದಾಖಲೆಗಳನ್ನು ಒದಗಿಸಿಲ್ಲವೆಂಬ ಕಾರಣಗಳಿಗಾಗಿ ಚಿಕಿತ್ಸೆಯನ್ನು ನೀಡಲು ನಿರಾಕರಿಸುವುದನ್ನು ತಡೆಗಟ್ಟುವ ಬಗ್ಗೆ - ಸೂಚನೆಗಳು.

******

ರಾಜ್ಯದ ಎಲ್ಲಾ ಸಾರ್ವಜನಿಕ ಆಸ್ಪತ್ರೆಗಳಲ್ಲಿ ತುರ್ತು ಆರೋಗ್ಯ ಸೇವೆ ನೀಡುವ ಸಮಯದಲ್ಲಿ ಸಾರ್ವಜನಿಕರಿಗೆ ಅನುಕೂಲವಾಗುವ ನಿಟ್ಟಿನಲ್ಲಿ ರಾಜ್ಯದ ಎಲ್ಲಾ ಆಸ್ಪತ್ರೆಗಳಲ್ಲಿ ಕರ್ತವ್ಯ ನಿರ್ವಹಿಸುತ್ತಿರುವ ವೈದ್ಯರು ಮತ್ತು ಅರೆ ವೈದ್ಯಕೀಯ ಸಿಬ್ಬಂದಿ/ಇತರೆ ಸಿಬ್ಬಂದಿಗಳು ಈ ಕೆಳಕಂಡ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸಲು ಸೂಚಿಸಿದೆ.-

1. ರಾಜ್ಯವು ಸಾರ್ವಜನಿಕ ಆರೋಗ್ಯ ಪದ್ಧತಿಯಲ್ಲಿ ಇದುವರೆವಿಗೂ ರೋಗಿಗಳ ತಾಯಿ ಕಾರ್ಡ್, ಆಧಾರ್ ಕಾರ್ಡ್, ಪಡಿತರ ಚೀಟಿ ಇಲ್ಲದೆಯೂ ಆರೋಗ್ಯ ಸೇವೆಗಳನ್ನು ನೀಡುತ್ತಾ ಬಂದಿದ್ದು, ತುರ್ತು ಆರೋಗ್ಯ ಸೇವೆಗಾಗಿ ದಾಖಲಾಗುವ ಸಂದರ್ಭದಲ್ಲಿ ರೋಗಿಗೆ ಸಂಬಂಧಿಸಿದ ದಾಖಲೆಗಳನ್ನು ಒದಗಿಸಿಲ್ಲವೆಂಬ ಕಾರಣಕ್ಕಾಗಿ ಅವರನ್ನು ಚಿಕಿತ್ಸೆಗಾಗಿ ದಾಖಲಿಸಿಕೊಳ್ಳದೆ ನಿರಾಕರಿಸತಕ್ಕದ್ದಲ್ಲ.
2. ತುರ್ತು ಪರಿಸ್ಥಿತಿಯಲ್ಲಿ ಚಿಕಿತ್ಸೆಗಾಗಿ ದಾಖಲಾಗುವ ರೋಗಿಗೆ ಸಂಬಂಧಿಸಿದ ದಾಖಲೆಗಳು, ಅಂದರೆ ತಾಯಿಕಾರ್ಡ್, ಆಧಾರ್ ಕಾರ್ಡ್, ಪಡಿತರ ಚೀಟಿ ಇತರೆ ದಾಖಲೆಗಳನ್ನು ಒದಗಿಸದೇ ಇದ್ದರೂ, ರೋಗಿಯನ್ನು ದಾಖಲಿಸಿಕೊಂಡು ಆರೋಗ್ಯ ಸೇವೆಯನ್ನು ನೀಡುವುದು ಆಸ್ಪತ್ರೆಗಳ/ಆರೋಗ್ಯ ಕೇಂದ್ರಗಳ ಆದ್ಯ ಕರ್ತವ್ಯವಾಗಿರುತ್ತದೆ.
3. ಆರೋಗ್ಯ ಸೇವೆಯನ್ನು ನೀಡುವಾಗ ರೋಗಿಯ ರಾಷ್ಟ್ರೀಯತೆ/ಜಾತಿ/ವರ್ಗ/ಆರ್ಥಿಕ ಸ್ಥಿತಿಯನ್ನು ಅವಲಂಬಿಸಬಾರದು.
4. ತುರ್ತು ಪರಿಸ್ಥಿತಿಯಲ್ಲಿ ರೋಗಿಯ ನೋವು ಸಂಕಟವನ್ನು ನಿವಾರಿಸುವುದು ವೈದ್ಯರ, ಶುಶ್ರೂಷಕರ ಮತ್ತು ಇತರೆ ಸಿಬ್ಬಂದಿ ವರ್ಗದವರ ಆದ್ಯ ಕರ್ತವ್ಯವಾಗಿರುತ್ತದೆ.
5. ಸಾರ್ವಜನಿಕ ಆರೋಗ್ಯ ಸಂಸ್ಥೆಗಳು ತುರ್ತು ಚಿಕಿತ್ಸೆಗೆ ಒಳಪಡುವ ರೋಗಿಗಳಿಗೆ ಸಂಬಂಧಿಸಿದ ಅಗತ್ಯ ದಾಖಲೆಗಳನ್ನು 2-3 ದಿನಗಳ ಒಳಗಾಗಿ ಒದಗಿಸಲು ಅವಕಾಶ ನೀಡತಕ್ಕದ್ದು.

ಮುಂದಿನ ದಿನಗಳಲ್ಲಿ ತುರ್ತು ಚಿಕಿತ್ಸೆಗಾಗಿ ದಾಖಲಾಗುವ ರೋಗಿಗಳು ಸಂಬಂಧಿಸಿದ ದಾಖಲೆಗಳನ್ನು ಒದಗಿಸಿಲ್ಲವೆಂಬ ಕಾರಣದಿಂದಾಗಿ ಚಿಕಿತ್ಸೆ ನೀಡುವುದನ್ನು ನಿರಾಕರಿಸಿದಲ್ಲಿ, ಸಂಬಂಧಪಟ್ಟ ಆಸ್ಪತ್ರೆಯ ವೈದ್ಯರು ಮತ್ತು ಅರೆ ವೈದ್ಯಕೀಯ ಸಿಬ್ಬಂದಿ/ಇತರೆ ಸಿಬ್ಬಂದಿಗಳನ್ನು ನೇರ ಜವಾಬ್ದಾರರನ್ನಾಗಿಸಿ, ಅದು ಅವರು ಎಸಗಿರುವ ದುರ್ನಡತೆ ಎಂದು ಪರಿಗಣಿಸಿ ನಿಯಮಾನುಸಾರ ಶಿಸ್ತು ಕ್ರಮ ಜರುಗಿಸಲಾಗುತ್ತದೆ.

(ಟಿ. ಕೆ. ಅನಿಲ್ ಕುಮಾರ್)
ಸರ್ಕಾರದ ಪ್ರಧಾನ ಕಾರ್ಯದರ್ಶಿ,
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ.

**ಇವರಿಗೆ:-**

1. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯಸೌಧ, ಬೆಂಗಳೂರು.
2. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ, ಆರೋಗ್ಯಸೌಧ, ಬೆಂಗಳೂರು.
3. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು, ಆರೋಗ್ಯಸೌಧ, ಬೆಂಗಳೂರು.